# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಅಲ್ಪಸಂಖ್ಯಾತರ ಮಹಿಳೆಯರಿಗೆ ತಾಲ್ಲೂಕು ಮಟ್ಟದಲ್ಲಿ ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯೋಗಾವಕಾಶಗಳಿಗೆ ಪ್ರತ್ಯೇಕ ತರಬೇತಿ ಹಾಗೂ ಮೂಲ ಸೌಕರ್ಯ ಒದಗಿಸುವ ಹೊಸ ಯೋಜನೆಯನ್ನು ಜಾರಿಗೊಳಿಸುವ ಬಗ್ಗೆ.

**ಓದಲಾಗಿದೆ:** 1) 2014-15ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಲಾದ ನೂತನ ಯೋಜನೆ.

2) ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು ಇವರ ಏಕಕಡತ ಪದ್ಧತಿಯ ಪ್ರಸ್ತಾವನೆ ಸಂಖ್ಯೆ:ಅಸಂನಿ/ಕೌತ/ಸಿಆರ್-2/2014-15, ದಿ: 25.04.2014.

**ಪ್ರಸ್ತಾವನೆ:-**

ಮೇಲೆ ಓದಲಾದ (1)ರಲ್ಲಿ 2014-15ನೇ ಸಾಲಿನ ಆಯುವ್ಯಯ ಭಾಷಣದಲ್ಲಿ ತಾಲ್ಲೂಕುಗಳಲ್ಲಿ ಅಲ್ಪಸಂಖ್ಯಾತರ ಸಮುದಾಯದ ಮಹಿಳೆಯರಿಗಾಗಿ ಪ್ರತ್ಯೇಕ ಕೌಶಲ್ಯಾಭಿವೃದ್ಧಿ ಮತ್ತು ಉದ್ಯೋಗಾವಕಾಶಕ್ಕೆ ಸಂಬಂಧಿಸಿದ ತರಬೇತಿ ಮತ್ತು ಮೂಲಭೂತ ಸೌಕರ್ಯ ಒದಗಿಸಲು ಉದ್ದೇಶಿಸಿ, ಪ್ರಸಕ್ತ ಸಾಲಿನಲ್ಲಿ 200.00 ಲಕ್ಷಗಳನ್ನು ಮೀಸಲಿರಿಸಲಾಗಿದೆ ಎಂದು ಘೋಷಿಸಲಾಗಿದೆ.

ರಾಜ್ಯದ ಅಲ್ಪಸಂಖ್ಯಾತ ಮಹಿಳೆಯರು ಇತರರ ಮೇಲೆ ಅವಲಂಬಿಸದೆ, ಸ್ವಾವಲಂಬಿಗಳಾಗಿ ಜೀವನ ನಡೆಸಲು ಹಾಗೂ ಸ್ವಯಂ ಉದ್ಯೋಗ ಪಡೆಯಲು ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಗಳಿಂದ ಸ್ವಯಂ ಉದ್ಯೋಗಿಗಳಾಗುವಂತಹ, ಜಿಲ್ಲೆಯ ಪ್ರಾಮುಖ್ಯತೆ ಪಡೆದಂತಹ ಕೌಶಲ್ಯ ಹೊಂದಿರುವ ತರಬೇತಿ, ಈಗಿನ ಜೀವನ ಶೈಲಿಗೆ ಹೊಂದುವಂತಹ ತರಬೇತಿ ಕಾರ್ಯಕ್ರಮಗಳನ್ನು ನೀಡಲು ನಿರ್ದೇಶನಾಲಯದಿಂದ ಜಾರಿಗೊಳಿಸಲು ಉದ್ದೇಶಿಸಿ ಮೇಲೆ ಓದಲಾದ ಕ್ರ.ಸಂ.(2)ರಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ರವರು ಸರ್ಕಾರಕ್ಕೆ ಏಕಕಡತ ಪದ್ಧತಿಯಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : MWD 231 MDS 2014, ಬೆಂಗಳೂರು ದಿ: 19-07-2014**

ರಾಜ್ಯದ ಅಲ್ಪಸಂಖ್ಯಾತ ಸಮುದಾಯದ ಮಹಿಳೆಯರು ಇತರರ ಮೇಲೆ ಅವಲಂಭಿಸದೇ, ಕುಟುಂಬವನ್ನು ಆರ್ಥಿಕವಾಗಿ ಅಭಿವೃದ್ಧಿಪಡಿಸಲು ನೆರವು ನೀಡುವಲ್ಲಿ ಸಹಕಾರಿಯಾಗುವಂತೆ ಹಾಗೂ ಸ್ವಾವಲಂಬಿಗಳಾಗಿ ಬದುಕಲು ಇವರಿಗೆ ಸ್ವಯಂ ಉದ್ಯೋಗವನ್ನು ಪಡೆಯಲು ಅಗತ್ಯವಾದಂತಹ ತರಭೇತಿಗಳನ್ನು ತಾಲ್ಲೂಕು ಮಟ್ಟದಲ್ಲಿ ಆಯೋಜಿಸುವ ಹೊಸ ಕಾರ್ಯಕ್ರಮವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು 2014-15ನೇ ಸಾಲಿನಿಂದ ಪ್ರಾರಂಭಿಸಲು ಅನುಮತಿ ನೀಡಿ ಆದೇಶಿಸಿದೆ.